# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 893 (1110)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : ಬೆಂಗಳೂರು ಉತ್ತರ ತಾಲ್ಲೂಕಿನಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳು ಗ್ರಾ.ಪಂ.ಗಳ ಸ್ಥಿರಾಸ್ತಿ ಅನಧಿಕೃತವಾಗಿ ನಿರ್ವಹಿಸುತ್ತಿರುವ ಬಗ್ಗೆ

(ಅ) ಇ-ಸ್ವತ್ತು ವಿತರಣೆಯಲ್ಲಿ ತಾಲ್ಲೂಕು ಪಂಚಾಯತಿಯ ಪಾತ್ರವೇನು;

(ಆ) ಸ್ಥಿರಾಸ್ತಿಗಳಿಗೆ ಸಂಬಂಧಿಸಿದಂತೆ ಖಾತೆಗಳನ್ನು ನಿರ್ವಹಿಸಲು ತಾಲ್ಲೂಕು ಪಂಚಾಯತಿಗೆ ಅಧಿಕಾರವಿದೆಯೇ ; (ಸದರಿ ಕಾಯ್ದೆ/ಸುತ್ತೋಲೆಯ ಪ್ರತಿಯನ್ನು ನೀಡುವುದು)

(ಇ) ಸರ್ಕಾರಿ ಸುತ್ತೋಲೆ ಸಂಖ್ಯೆ; ಗ್ರಾಅಪ:126:ಗ್ರಾಪಂಅ:2003 (ಭಾಗ-1), ದಿನಾಂಕ: 28-01-2004ರ ಪ್ರಕಾರ ಗ್ರಾಮ ಪಂಚಾಯತಿಗಳ ಸ್ಥಿರಾಸ್ತಿಗಳ ಖಾತೆ ನಿರ್ವಹಣೆಯಲ್ಲಿ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಸ್ತಕ್ಷೇಪ ನಡೆಸಿದರೆ ಶಿಸ್ತು ಕ್ರಮ ಕೈಗೊಳ್ಳುವುದಾಗಿ ತಿಳಿಸಲಾಗಿದೆಯೇ ; ತಿಳಿಸಲಾಗಿದ್ದರೆ, ಸುತ್ತೋಲೆಗೆ ವಿರುದ್ಧವಾಗಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು ; ಕೈಗೊಳ್ಳದಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ;

(ಈ) ಸದರಿ ತಾಲ್ಲೂಕಿನಲ್ಲಿ ನಿಗದಿತ ಕಾಲಮಿತಿಗಿಂತ ಹೆಚ್ಚು ಅವಧಿ ಕಳೆದರೂ ಖಾತೆ ಮಾಡದ ಪ್ರಕರಣಗಳೆಷ್ಟು ; ಅವಧಿ ಮುಗಿದರೂ ಖಾತೆ ಮಾಡದಿರಲು ಕಾರಣಗಳೇನು ; (ಪ್ರತಿ ಪ್ರಕರಣಕ್ಕೂ ಪ್ರತ್ಯೇಕವಾಗಿ ಕಾರಣಗಳನ್ನು ನೀಡುವುದು)

(ಉ) ಸಕಾರಣವಿಲ್ಲದೆ ಇ-ಖಾತಾ ಅರ್ಜಿಗಳನ್ನು ತಡೆಹಿಡಿದ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ ; ಕೈಗೊಳ್ಳದಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ?